5756 (6490) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ವಿವಿಧ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆ ಎಷ್ಟು ಹಾಗೂ ಈ ಹುದ್ದೆಗಳು ಯಾವಾಗಿನಿಂದ ಖಾಲಿ ಇವೆ: (ಸರ್ಕಾರಿ/ಅನುದಾನಿತ ಶಾಲೆವಾರು, ಜಿಲ್ಲಾವಾರು, ಶಿವಮೊಗ್ಗ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು):

ಶ್ರೀ ಆರ್. ರಾಮಲಿಂಗಾರೆಡ್ಡಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು)

ಅ) ರಾಜ್ಯದಲ್ಲಿನ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳ ವಿವರ ಕೆಳಕಂಡಂತಿದೆ :

1. ಸರ್ಕಾರಿ ಪ್ರಾಥಮಿಕ ಶಾಲೆಗಳು – 688
2. ಸರ್ಕಾರಿ ಪ್ರೌಢಶಾಲೆಗಳು – 4487
3. ಅನುದಾನಿತ ಪ್ರಾಥಮಿಕ ಶಾಲೆಗಳು – 4768
4. ಅನುದಾನಿ ಪ್ರೌಢಶಾಲೆಗಳು – 2104

[ಜಿಲ್ಲಾವಾರು ಮಾಹಿತಿಯನ್ನು ಅನುಬಂಧ1ರಲ್ಲಿ ಮತ್ತು ಶಿವಮೊಗ್ಗ ಜಿಲ್ಲೆಯ ತಾಲ್ಲೂಕುವಾರು ಮಾಹಿತಿಯನ್ನು ಅನುಬಂಧ2 ರಲ್ಲಿ ಲಗತ್ತಿಸಿದೆ]

ಆ) ಈ ಹುದ್ದೆಗಳನ್ನು ಈವರೆಗೂ ತುಂಬದಿರಲು ಕಾರಣಗಳೇನು ಹಾಗೂ ಈ ಹುದ್ದೆಗಳನ್ನು ರದ್ದುಪಡಿಸಲು/ಅನುದಾನ ರಹಿತ ಹುದ್ದೆಗಳನ್ನಾಗಿ ಘೋಷಿಸುವ ಉದ್ದೇಶ ಸರ್ಕಾರಕ್ಕಿದೆಯೇ;

ಇ) ಇಲ್ಲದಿದ್ದಲ್ಲಿ, ಈ ಹುದ್ದೆಗಳನ್ನು ಯಾವಾಗ ತುಂಬಲಾಗುವುದೆ ?

ಅ) ಮತ್ತು ಇ) ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಹುದ್ದೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ ಖಾಲಿಯಿರುವ ಬೋಧಕ ಹುದ್ದೆಗಳನ್ನು ಅನುದಾನ ರಹಿತ ಹುದ್ದೆಗಳನ್ನಾಗಿ ಘೋಷಿಸುವ ಉದ್ದೇಶ ಸರ್ಕಾರಕ್ಕೆ ಇರುವುದಿಲ್ಲ. ಅಗತ್ಯ ಕಾರ್ಯಭಾರವಿರುವ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿನ ಹುದ್ದೆಗಳನ್ನು ಹೆಚ್ಚುವರಿಯಾಗಿ ಗುರುತಿಸಿರುವ ಅನುದಾನಿತ ಪ್ರಾಥಮಿಕ ಶಾಲಾ ಶಿಕ್ಷಕರ ಮರು ಹಂಚಿಕೆ ಮೂಲಕ ತುಂಬಲು ಪ್ರಕ್ರಿಯೆ ಪ್ರಾರಂಭವಾಗಿದೆ. ಅನುದಾನಿತ ಪ್ರೌಢಶಾಲೆಗಳಲ್ಲಿ ಸುಮಾರು 381 ಹುದ್ದೆಗಳಿಗೆ ಇಲಾಖೆಯ ಪೂರ್ವಾನುಮತಿ ಪಡೆದು ನೇಮಕವಾದ ಶಿಕ್ಷಕರನ್ನು ಅನುದಾನ ಸಹಿತ ಅನುಮೋದಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಉಳಿದ ಖಾಲಿ ಹುದ್ದೆಗಳನ್ನು ಆರ್ಥಿಕ ಮಿತವ್ಯಯ ಸಡಿಲಿಸಿದ ನಂತರ ನೇಮಕಾತಿ ಮಾಡಲಾಗುವುದು.

5757 (6491) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳ ಸಲಹಾ ಸಮಿತಿಯನ್ನು ಹೊಸದಾಗಿ ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹೌದಾದಲ್ಲಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಆಸ್ಪತ್ರೆಗಳಿಗೆ ಶಾಸಕರ ನೇತೃತ್ವದ ಸಮಿತಿ ರಚಿಸಲಾಗುವುದೆ;